ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2014–15 ದಿನಾಂಕ: 29–7–2015

## ಪತ್ರಿಕಾ ಪ್ರಕಟಣೆ

# ಪರವಾನಗಿ ಇಲ್ಲದೆ ಔಷಧ ಮಾರಾಟ: ಶಿಕ್ಷೆ

**ಬೆಂಗಳೂರು, ಜುಲೈ 29 (ಕರ್ನಾಟಕ ವಾರ್ತೆ)**

ದಿನಾಂಕ 03/07/2015 ರಂದು ಮಾನ್ಯ ಆರ್ಥಿಕ ಅಪರಾಧಗಳ ವಿಶೇಷ ನ್ಯಾಯಾಲಯ, ಬೆಂಗಳೂರು ರವರು ಶ್ರೀಮತಿ ಬಿ. ಲಕ್ಷ್ಮೀ, ಮಾಲೀಕರು ಮೆ॥ ಹೈಟೆಕ್ ಸೈಂಟಿಫಿಕ್ ಇಂಕ್, ನಂ. 3–4–232–236/102, ಲಿಂಗಂಪಳ್ಳಿ, ಕಾಚಿಗುಡ ಮುಖ್ಯ ರಸ್ತೆ, ಎಮ್.ಸಿ.ಹೆಚ್. ವೃತ್ತ–3, ಮಂಡಲ, ಹೈದರಾಬಾದ್–500027 (ಆಮದುದಾರರು) ರವರಿಗೆ ಲ್ಯಾಬೋಟೆಕ್ಟ್ ಎಂಬ್ರಿಯೋ ಟ್ರಾನ್ಸಫರ್ ಕ್ಯಾಥೆಟರ್ ಸೆಟ್ ಔಷಧವನ್ನು ಆಮದುದಾರರ ಹೆಸರು, ವಿಳಾಸ ಮತ್ತು ಆಮದು ಪರವಾನಗಿ ಸಂಖ್ಯೆ ಇಲ್ಲದೆ ಔಷಧ ಮತ್ತು ಕಾಂತಿವರ್ಧಕ ಅಧಿನಿಯಮಾವಳಿಗಳನ್ನು ಉಲ್ಲಂಘಿಸಿ ಮಾರಾಟ ಮಾಡಿರುವುದಕ್ಕೆ ರೂ. 20,000/– ದಂಡ ಹಾಗೂ ನ್ಯಾಯಾಲಯದ ಅವಧಿ ಮುಗಿಯುವವರೆಗೆ ಸಾದಾ ಶಿಕ್ಷೆಯನ್ನು ವಿಧಿಸಿ ತೀರ್ಪು ನೀಡಿರುತ್ತಾರೆ. ಸದರಿ ಪ್ರಕರಣದಲ್ಲಿ ಔಷಧ ಪರಿವೀಕ್ಷಕರು, ರಾಜ್ಯ ಗುಪ್ತ ವಾರ್ತಾ ಶಾಖೆ, ಬೆಂಗಳೂರು ತನಿಖೆ ನಡೆಸಿ ಮೊಕದ್ದಮೆ ದಾಖಲಿಸಿರುತ್ತಾರೆ.
ಪಲ್ಲವಿ/ಬಾಬು/ಕೆಎಂ

## Violation of Drugs & Cosmetics Act: Imposed Fine

Bangalore, July 29(Karnataka Information)

On 03/07/2015, the Honourable Special Court for Economic Offences, Bangalore has imposed fine of Rs. 20,000/- and imprisonment Till Raising of Court to accused Smt. B. Laxmi, Proprietrix of M/s Hytek Scientific INC, Door No. 3-4-232-236/102, Lingampally, Kachiguda Main Road, M.C.H. Circle-3, Mandal, Hyderabad-27 for importing and selling the drug Labotect Embryo Transfer Catheter set without mentioning the name, address of the importer and import licence number in violation of Drugs & Cosmetics Act. This complaint was investigated and filed by Drugs Inspector, State Intelligence Branch, Bangalore.
pallavi/babu/km

# ಡಿಪ್ಲೋಮಾ ಇನ್ ಸಿನೆಮಾಟೊಗ್ರಫಿ, ಸೌಂಡ್ ರೆಕಾರ್ಡಿಂಗ್: ಅರ್ಜಿ ಸಲ್ಲಿಸಲು ಅವಧಿ ವಿಸ್ತರಣೆ

ಬೆಂಗಳೂರು, ಜುಲೈ 29 (ಕರ್ನಾಟಕ ವಾರ್ತೆ)

ತಾಂತ್ರಿಕ ಶಿಕ್ಷಣ ಇಲಾಖೆಯ ಸರ್ಕಾರಿ ಚಲನಚಿತ್ರ ಮತ್ತು ದೂರದರ್ಶನ ಸಂಸ್ಥೆಯ ವತಿಯಿಂದ 2015-16 ನೇ ಸಾಲಿನ ಡಿಪ್ಲೊಮಾ ಇನ್ ಸಿನೆಮಾಟೊಗ್ರಫಿ ಮತ್ತು ಡಿಪ್ಲೊಮಾ ಇನ್ ಸೌಂಡ್ ರೆಕಾರ್ಡಿಂಗ್ ಅಂಡ್ ಇಂಜಿನಿಯರಿಂಗ್ ಕೋರ್ಸ್‍ಗಳ ಪ್ರವೇಶಕ್ಕಾಗಿ ಅರ್ಜಿಗಳನ್ನು ನೀಡುವ ಮತ್ತು ಸ್ವೀಕರಿಸುವ ದಿನಾಂಕವನ್ನು ಆಗಸ್ಟ್ 5, 2015 ರವರೆಗೆ ವಿಸ್ತರಿಸಲಾಗಿದೆ.

ಸರ್ಕಾರಿ ಆದೇಶದ ಪ್ರಕಾರ ಹೊರ ರಾಜ್ಯದ ಅಭ್ಯರ್ಥಿಗಳಿಗೆ ಶೇ 50 ರಷ್ಟು ಪ್ರವೇಶಾವಕಾಶ ಕಲ್ಪಿಸಲಾಗಿದೆ. ಅಭ್ಯರ್ಥಿಗಳು ಕರ್ನಾಟಕ ದ್ವಿತೀಯ ಪಿ.ಯು.ಸಿ. ವಿಜ್ಞಾನ (ಪಿ.ಸಿ.ಎಂ. ವಿಷಯಗಳಲ್ಲಿ) ಅಥವಾ ತತ್ಸಮಾನ ಹಾಗೂ ಹೊರ ರಾಜ್ಯಗಳ ಅಭ್ಯರ್ಥಿಗಳು 10 + 2 (ಪಿ.ಸಿ.ಎಂ. ವಿಷಯಗಳಲ್ಲಿ) ಪರೀಕ್ಷೆಯಲ್ಲಿ ಎಲ್ಲಾ ವಿಷಯಗಳಲ್ಲಿ ಒಟ್ಟಾರೆಯಾಗಿ ಶೇ 35 ರಷ್ಟು ಅಂಕಗಳನ್ನು ಪಡೆದು ತೇರ್ಗಡೆಯಾಗಿರಬೇಕು.

ಅರ್ಜಿಗಳನ್ನು ಪ್ರಾಂಶುಪಾಲರ ಕಚೇರಿ, ಸರ್ಕಾರಿ ಚಲನಚಿತ್ರ ಮತ್ತು ದೂರದರ್ಶನ ಸಂಸ್ಥೆ, ಹೆಸರಘಟ್ಟ ಅಂಚೆ, ಬೆಂಗಳೂರು – 88, ಇಲ್ಲಿಂದ ರೂ 300/- (ಎಸ್‍ಸಿ/ಎಸ್‍ಟಿ ಮತ್ತು ಪ್ರವರ್ಗ-1 ರ ಅಭ್ಯರ್ಥಿಗಳು ರೂ. 250/-) ಗಳನ್ನು ಖುದ್ದು ಪಾವತಿಸಿ ಪಡೆಯಬಹುದು.

ಹೆಚ್ಚಿನ ವಿವರಗಳಿಗಾಗಿ ದೂರವಾಣಿ ಸಂಖ್ಯೆ 080-28466768, 28446672, ಅಥವಾ ವೆಬ್‍ಸೈಟ್ web: www.filminstitutebangalore.com ಅನ್ನು ಸಂಪರ್ಕಿಸಬಹುದಾಗಿದೆ.

ಪಲ್ಲವಿ/ಬಾಬು/ಜಿಪಿಆರ್.

# ಮುಖ್ಯಮಂತ್ರಿಗಳ ಸಭೆ ಮುಂದೂಡಿಕೆ

ಬೆಂಗಳೂರು, ಜುಲೈ 29 (ಕರ್ನಾಟಕ ವಾರ್ತೆ)

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಾಜಿ ರಾಷ್ಟ್ರಪತಿ ದಿ. ಡಾ: ಎ.ಪಿ.ಜೆ. ಅಬ್ದುಲ್ ಕಲಾಂ ಅವರ ಅಂತ್ಯಕ್ರಿಯೆಯಲ್ಲಿ ಪಾಲ್ಗೊಳ್ಳಲು ತಮಿಳುನಾಡಿಗೆ ತೆರಳುತ್ತಿರುವ ಹಿನ್ನೆಲೆಯಲ್ಲಿ ದಿನಂಕ 31-7-2015 ರಂದು ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ನಡೆಯಬೇಕಿದ್ದ ಡಿ. ದೇವರಾಜು ಅರಸು ಅವರ ಜನ್ಮ ಶತಮಾನೋತ್ಸವ ಆಚರಣೆ ಸಂಬಂಧಿತ ಸಭೆಯನ್ನು ಮುಂದೂಡಲಾಗಿದೆ ಎಂದು ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ ಡಿ.ಎಸ್. ರಮೇಶ್ ತಿಳಿಸಿದ್ದಾರೆ.

ಪಲ್ಲವಿ/ಬಾಬು/ಜಿಪಿಆರ್.

## Submit Self Declaration of Family Income for Scholarship

**Bangalore, July 29 (Karnataka Information)**

**The Ministry of Minority Affairs has informed that, the the eligible Minority students who are seeking Government of India Pre Matric, Post Matric and Merit Cum Means based Scholarship shall submit SELF DECLARATION OF FAMILY INCOME instead of Income Certificate issued by Tahsildar. Similary the students can submit self declaration of religion and self attestation for previous year mark sheet, a release from the ministry stated .**

ಪಲ್ಲವಿ/ಬಾಬು/ಜಿಪಿಆರ್.

## ಯುವ ಬರಹಗಾರರ ಚೊಚ್ಚಲ ಕೃತಿ : ಪ್ರೋತ್ಸಾಹ ಧನಕ್ಕಾಗಿ ಅರ್ಜಿ ಆಹ್ವಾನ

ಬೆಂಗಳೂರು, ಜುಲೈ 29 (ಕರ್ನಾಟಕ ವಾರ್ತೆ)

ಕನ್ನಡ ಪುಸ್ತಕ ಪ್ರಾಧಿಕಾರವು 2014 ನೇ ಸಾಲಿನ ಯುವ ಬರಹಗಾರರ ಚೊಚ್ಚಲ ಕೃತಿಗಳನ್ನು ಪ್ರಕಟಿಸಲು ಪ್ರೋತ್ಸಾಹಧನ ನೀಡುವ ಸಲುವಾಗಿ ಅರ್ಜಿಗಳನ್ನು ಆಹ್ವಾನಿಸಿದೆ.

ಅರ್ಜಿದಾರರು ಕನಿಷ್ಠ 18 ರಿಂದ 35 ವರ್ಷ ವಯೋಮಿತಿಯವರಾಗಿರಬೇಕು. ಸ್ವ-ವಿವರವುಳ್ಳ ಅರ್ಜಿಯೊಂದಿಗೆ ದೃಢೀಕೃತ ಎಸ್.ಎಸ್.ಎಲ್.ಸಿ. ಪ್ರಮಾಣ ಪತ್ರದ ಪ್ರತಿ ಅಥವಾ ಜನನ ಪತ್ರದ ಪ್ರತಿಯನ್ನು ಸಲ್ಲಿಸಬೇಕು. ಅಲ್ಲದೆ ಪ್ರಸ್ತುತ ಸಲ್ಲಿಸಲಿರುವ ಕೃತಿಯು ತಮ್ಮ ಚೊಚ್ಚಲ ಕೃತಿಯಾಗಿದ್ದು, ಎಲ್ಲಿಯೂ ಪ್ರಕಟವಾಗಿಲ್ಲವೆಂದು ಸ್ವಯಂ ದೃಢೀಕರಣ ಪತ್ರ ನೀಡಬೇಕು.

ಆಯ್ಕೆಗಾಗಿ ಸಲ್ಲಿಸುವ ಹಸ್ತಪ್ರತಿಯು ಡಿ.ಟಿ.ಪಿ ಮಾಡಿಸಿದಾಗ 1/8 ಡೆಮ್ಮಿ ಅಳತೆಯಲ್ಲಿ ಕನಿಷ್ಠ 60 ಪುಟಗಳಿರಬೇಕು. ಅನುವಾದ, ಪಠ್ಯಪುಸ್ತಕ ಹಾಗೂ ಬೇರಾವುದೇ ಪದವಿಗೆ ಸಿದ್ದಪಡಿಸುವ ಪ್ರಬಂಧಗಳನ್ನು ಹೊರತುಪಡಿಸಿ, ಕಥೆ, ಕಾದಂಬರಿ, ಕವನ, ನಾಟಕ, ವಿಮರ್ಶಾ ಲೇಖನ, ಪ್ರಬಂಧ ಮುಂತಾದ ಕನ್ನಡ ಸಾಹಿತ್ಯದ ಪ್ರಕಾರಗಳಿಗೆ ಸಂಬಂಧಿಸಿದಂತೆ ಹಸ್ತಪ್ರತಿ ಇರಬೇಕು. ಕೃತಿಯ ಪಠ್ಯದಲ್ಲಿ ಯಾವುದೇ ಧರ್ಮ, ದೇವರು, ಜಾತಿ, ರಾಷ್ಟ್ರೀಯ ನಾಯಕರುಗಳ ಕುರಿತಂತೆ ನೇರವಾಗಿಯೇ ಆಗಲಿ ಅಥವಾ ಪರೋಕ್ಷವಾಗಿಯೇ ಆಗಲಿ ಮನನೋಯಿಸುವಂತಹ ವಿಷಯವಾಗಲಿ ಇರಬಾರದು. ಅಲ್ಲದೆ ರಾಷ್ಟ್ರೀಯ ಭಾವೈಕ್ಯತೆಗೆ ಧಕ್ಕೆ

ತರುವಂತಹ ವಿಷಯ/ಸಂಗತಿಗಳು ಪ್ರಸ್ತಾಪವಾಗಿರಬಾರದು. ಪ್ರಾಧಿಕಾರಕ್ಕೆ ಸಲ್ಲಿಸುವ ಅರ್ಜಿಗಳನ್ನು/ಹಸ್ತಪ್ರತಿಗಳನ್ನು ಹಿಂದಿರುಗಿಸಲಾಗುವುದಿಲ್ಲ. ಹಸ್ತಪ್ರತಿಯ/ಡಿ.ಟಿ.ಪಿ. ಪ್ರತಿಯ ಎರಡನೇ ಪ್ರತಿಯನ್ನು ಸಲ್ಲಿಸಲು ತಿಳಿಸಿದೆ.

ಅರ್ಜಿಗಳನ್ನು 22-08-2015 ರೊಳಗೆ ಆಡಳಿತಾಧಿಕಾರಿಗಳು, ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು – 560 002 ಅವರಿಗೆ ಕಳುಹಿಸಿಕೊಡಲು ಕೋರಿದೆ.

ಹೆಚ್ಚಿನ ಮಾಹಿತಿಗಾಗಿ ಆಡಳಿತಾಧಿಕಾರಿಗಳು ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು – ದೂರವಾಣಿ ಸಂಖ್ಯೆ 080 – 22484516/22017784 ಇಲ್ಲಿ ಸಂಪರ್ಕಿಸಬಹುದಾಗಿದೆ.

ಪಲ್ಲವಿ/ಬಾಬು/ಜಿಪಿಆರ್.